**CFC.R.P.67** ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಪ್ಪಳ

**ಎಸ್ .ಸಿ. ನಂಃ 73/2019**

Form No.4(Civil)
(R.P.No.57)

ಪಿ.ಡಬ್ಲ್ಯೂ ನಂಃ 01
ಸಿ.ಡಬ್ಲ್ಯೂ ನಂಃ 01
ಸಾಕ್ಷಿಯನ್ನು ದಿನಾಂಕಃ 21-03-2023
ರಂದು ಪ್ರತಿಜ್ಞೆ ಮಾಡಿಸಲಾಯಿತು

| | | |
|---|---|---|
| ಸಾಕ್ಷಿದಾರನ ಹೆಸರು | ಃ | ರಸೂಲಸಾಬ |
| ತಂದೆಯ ಹೆಸರು | ಃ | ರಾಜೇಸಾಬ ಹಿರೇಮನಿ |
| ವಯಸ್ಸು | ಃ | 50 ವರ್ಷ |
| ಉದ್ಯೋಗ | ಃ | ಒಕ್ಕಲುತನ |
| ವಾಸ ಸ್ಥಳ | ಃ | ದಮ್ಮೂರು. |

**ಸಾಕ್ಷಿಯ ಮುಖ್ಯ ವಿಚಾರಣೆ ಃ ಸರ್ಕಾರಿ ಅಭಿಯೋಜಕರವರಿಂದ**

ಆರೋಪಿತರು ಗೊತ್ತಿಲ್ಲ, ನಾನು ನಮ್ಮ ಜಮೀನಿನಲ್ಲಿ ಶ್ರೀಗಂಧದ ಗಿಡವನ್ನು ಯಾರೋ ಕತ್ತರಿಸಿಕೊಂಡು ಹೋಗಿದ್ದಾರೆಂದು ದೂರನ್ನು ಕೊಟ್ಟಿದ್ದೆ. ಸದರಿ ದೂರನ್ನು ನಿಪಿ 1 ಎಂದು, ಸಹಿಯನ್ನು ನಿಪಿ 1(ಎ) ಎಂದು ಗುರುತಿಸಲಾಯಿತು. ನಾನು ಪೊಲೀಸರಿಗೆ ಆರೋಪಿತರು ಸದರಿ ಮರ ಕಡಿದುಕೊಂಡು ಹೋಗಿದ್ದಾರೆಂದು ದೂರು ಕೊಟ್ಟಿಲ್ಲ.

(ಈ ಹಂತದಲ್ಲಿ ಸರ್ಕಾರಿ ಅಭಿಯೋಜಕರ ಕೋರಿಕೆಯ ಮೇರೆಗೆ ಸದರಿ ಸಾಕ್ಷಿದಾರನನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಿದೆ.)

**ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದ**

ನಮ್ಮ ಹೊಲದ ಸುತ್ತ ಮತ್ತು ಹೊಲದಲ್ಲಿ ಶ್ರೀಗಂಧದ ಮರಗಳನುನ ಬೆಳೆಸಿದ್ದು ದಿಃ 25-3-2018 ರಂದು ರಾತ್ರಿ 8 ಗಂಟೆಗೆ ನಾನು, ನಜೀರಸಾಬ, ಕೆಲಸ ಮುಗಿಸಿಕೊಂಡು ವಾಪಸ್ ಬಂದಿದ್ದು ಮಾರನೇ ದಿನ ಬೆಳಿಗ್ಗೆ 9 ಗಂಟೆಗೆ ಹೋಗಿ ನೋಡಿದಾಗ ಅಲ್ಲಿ ಒಂದು ಶ್ರೀಗಂಧದ ಗಿಡವನ್ನು ಯಾರೋ ಕಳ್ಳತನ ಮಾಡಿಕೊಂಡು ಹೋಗಿದ್ದರು ಎಂದು ದೂರು ಸಲ್ಲಿಸಿದ್ದೇನೆ ಎಂದರೆ ಸರಿ, ಆದರೆ ಆರೋಪಿತರೇ ಸದರಿ ಗಂಧದ ಮರ ಕಡಿದಿದ್ದಾರೆಂದು ನಾನು ಪೊಲೀಸರಿಗೆ ಮರುಹೇಳಿಕೆ ಕೊಟ್ಟಿದ್ದಾರೆ ಎಂದರೆ ಸರಿಯಲ್ಲ, ಸದರಿ ಮರುಹೇಳಿಕೆಯನ್ನು ನಿಪಿ 2 ಎಂದು ಗುರುತಿಸಲಾಯಿತು. ಆರೋಪಿತರೊಂದಿಗೆ ರಾಜೀ ಮಾಡಿಕೊಂಡು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ.

<u>**ಪಾಟೀ ಸವಾಲು : ಆರೋಪಿತರ ಪರ ವಕೀಲರಿಂದ**</u>

**ಆರೋಪಿ ಪರ ವಕೀಲರು ಹಾಜರಿದ್ದು, ಪಾಟೀ ಸವಾಲು ಏನೂ ಇರುವುದಿಲ್ಲಾ ಅಂತಾ ತಿಳಿಸಿದ್ದಾರೆ.**

**ಮರು ವಿಚಾರಣೆ ಇಲ್ಲ.**

**(ನನ್ನ ಹೇಳಿಕೆಯ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಉಕ್ತ ಉಲ್ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿ ಇದೆ**

**(ಶ್ರೀಮತಿ ಬಿ ಎಸ್ ರೇಖಾ)**
**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು**
**ಕೊಪ್ಪಳ**